## ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 202 ಗ್ರಾಪಂಸಿ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:16-02-2018

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು.

**ಇವರಿಗೆ:**

ಎಲ್ಲಾ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು,
ಜಿಲ್ಲಾ ಪಂಚಾಯಿತಿಗಳು.

ಮಾನ್ಯರೆ,

**ವಿಷಯ:** ಗ್ರಾಮ ಪಂಚಾಯತಿ ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ಹುದ್ದೆಯ ನೇಮಕಾತಿಗೆ ಅನುಮೋದನೆ ನೀಡುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 22 ಗ್ರಾಪಂಸಿ 2014, ದಿನಾಂಕ: 10.09.2014.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಆದೇಶದಲ್ಲಿ ಗ್ರಾಮ ಪಂಚಾಯತಿಗಳಲ್ಲಿ ಪ್ರಸ್ತುತ ಖಾಲಿ ಇರುವ ಕ್ಲರ್ಕ್ ಡಾಟಾ ಎಂಟ್ರಿ ಆಪರೇಟರ್ ಹುದ್ದೆಗೆ ಗ್ರಾಮ ಪಂಚಾಯತಿಗಳಲ್ಲಿ ಡಾಟಾ ಎಂಟ್ರಿ ಆಪರೇಟರ್ ಆಗಿ ಕನಿಷ್ಠ 3 ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವವರನ್ನು ಮೊದಲ ಆದ್ಯತೆ ನೀಡಿ ಗ್ರಾಮ ಪಂಚಾಯತಿಯು ಸಾಮಾನ್ಯ ಸಭೆಯಲ್ಲಿ ನಿರ್ಣಯಿಸಿ ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ಹುದ್ದೆಗೆ ನೇಮಕಾತಿ ಮಾಡಿಕೊಂಡು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅನುಮೋದನೆಗಾಗಿ ಪ್ರಸ್ತಾವನೆ ಸಲ್ಲಿಸಿದ್ದು, ಇದುವರೆವಿಗೂ ಅನುಮೋದನೆ ನೀಡದಿರುವುದರಿಂದ ಸದರಿ ವೃಂದದ ನೌಕರರು ತೀವ್ರ ಆತಂಕಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆದುದರಿಂದ ಉಲ್ಲೇಖಿತ ಸರ್ಕಾರದ ಆದೇಶದಂತೆ ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ಹುದ್ದೆಗೆ ನೇಮಕಗೊಂಡಿರುವ ನೌಕರರಿಗೆ ನಿಯಮಾನುಸಾರ ಅನುಮೋದನೆ ನೀಡಲು ಕೂಡಲೇ ಕ್ರಮ ವಹಿಸಿ ಅದರ ಪ್ರತಿಯನ್ನು ದಿನಾಂಕ:23-02-2018 ರೊಳಗಾಗಿ ಸರ್ಕಾರಕ್ಕೆ ಕಳುಹಿಸುವಂತೆ ತಮ್ಮನ್ನು ಕೋರಿದೆ.

ತಮ್ಮ ವಿಶ್ವಾಸಿ,

16/2/18

(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು (ಪಂ.ರಾಜ್-1) ಹಾಗೂ
ಸರ್ಕಾರದ ಪದನಿಮಿತ್ತ ಜಂಟಿಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

16/2